ಅ) ಕಾರ್ಖಾನೆಯು ದಿನಾಂಕ 4.8.88 ಮತ್ತು 6.8.88ರ ಸಕ್ಕರೆ ನಿರ್ದೇಶಕರ ಆದೇಶಗಳನ್ನು ಕರ್ನಾಟಕ ಸಹಕಾರ ಸಂಘಗಳ ಕಾಯ್ದೆ, ನಿಯಮ ಮತ್ತು ಕಾರ್ಖಾನೆಯ ಬೈಲಾಗಳಿಗೆ ಅನುಗುಣವಾಗಿ ಜಾರಿಗೊಳಿಸಿರುತ್ತದೆ.

ಆ) ಉದ್ಭವಿಸುವುದಿಲ್ಲ.

ಇ) ಇಲ್ಲ

ಈ) ಸಕ್ಕರೆ ನಿರ್ದೇಶಕರು ದಿನಾಂಕ 4.8.88 ಮತ್ತು 6.8.88ರ ಆದೇಶದ ಮೇಲಿನ ನಿರ್ದೇಶನದ ವಿರುದ್ಧ ಮಾನ್ಯ ಉಚ್ಚ ನ್ಯಾಯಾಲಯದಲ್ಲಿ ರಿಟ್ ಅರ್ಜಿ ಸಂಖ್ಯೆ: 13072/88 ದಾಖಲಾಗಿ ತಡೆಯಾಜ್ಞೆ ನೀಡಲ್ಪಟ್ಟಿತ್ತು. ಸದರಿ ರಿಟ್ ಅರ್ಜಿಯು ದಿನಾಂಕ: 14.2.94ರಲ್ಲಿ ವಜಾ ಆಗಿರುತ್ತದೆ. ಇದರ ವಿರುದ್ಧ ರಿಟ್ ಅಪೀಲು ಸಂಖ್ಯೆ. 14/95 ದಾಖಲಾಗಿತ್ತು. ಕಾರ್ಖಾನೆಯವರು ಮಾನ್ಯ ಉಚ್ಚ ನ್ಯಾಯಾಲಯಕ್ಕೆ ಮೆಮೋ ಸಲ್ಲಿಸಿ, ದಿನಾಂಕ 6.8.88 ರಂದು ನೀಡಿದ ಆದೇಶವನ್ನು ಅನುಷ್ಠಾನಗೊಳಿಸಲಾಗಿದೆಯೆಂದು ತಿಳಿಸಿದ ಪ್ರಯುಕ್ತ ಮೇಲಿನ ರಿಟ್ ಅಪೀಲು ವಿಲೇವಾರಿಯಾಗಿರುತ್ತದೆ.

**ಬೆಳ್ತಂಗಡಿ ತಾಲ್ಲೂಕಿನಲ್ಲಿ ಅಂಗನವಾಡಿಗಳನ್ನು ಹೆಚ್ಚು ಮಾಡುವ ಬಗ್ಗೆ**

2373 (2975) : ಶ್ರೀ ಪ್ರಭಾಕರ ಬಂಗೇರ (ಬೆಳ್ತಂಗಡಿ) ಮಾನ್ಯ ಮಹಿಳಾ ಮತ್ತು ಮಕ್ಕಳ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ಬೆಳ್ತಂಗಡಿ ತಾಲ್ಲೂಕು ವ್ಯಾಪ್ತಿಯಲ್ಲಿ ಇರುವ ಒಟ್ಟು ಅಂಗನವಾಡಿಗಳ ಸಂಖ್ಯೆ ಎಷ್ಟು: ಅವುಗಳ ಪ್ರಮಾಣವು ಬೇಡಿಕೆಗನುಗುಣವಾಗಿ ಇದೆಯೆ: ಇಲ್ಲವಾದಲ್ಲಿ ಸರ್ಕಾರದ ಮುಂದಿನ ಕ್ರಮಗಳೇನು:

ಆ) ಪ್ರಸ್ತುತ ಇರುವ ಅಂಗನವಾಡಿಗಳ ಸಂಖ್ಯೆಯನ್ನು ಹೆಚ್ಚು ಮಾಡುವ ಪ್ರಸ್ತಾವನೆಯು ಸರ್ಕಾರದ ಮುಂದಿದೆಯೆ: ಇದ್ದಲ್ಲಿ ಯಾವಾಗ ಕಾರ್ಯರೂಪಕ್ಕೆ ತರಲಾಗುವುದು:

ಈ ಕುರಿತಾದ ಯೋಜನೆಯ ಪ್ರಸ್ತಾವವನ್ನು ಕೇಂದ್ರ ಸರ್ಕಾರಕ್ಕೆ ಕಳುಹಿಸಲಾಗಿದೆಯೇ: ಹೌದಾದಲ್ಲಿ ಅದರ ವಿವರಗಳೇನು?

ಶ್ರೀಮತಿ ಮೋಟಮ್ಮ (ಮಹಿಳಾ ಮತ್ತು ಮಕ್ಕಳ ಕಲ್ಯಾಣ ಸಚಿವರು)

ಅ) ಬೆಳ್ತಂಗಡಿ ತಾಲ್ಲೂಕು ವ್ಯಾಪ್ತಿಯಲ್ಲಿ ಒಟ್ಟು 193 ಅಂಗನವಾಡಿಗಳು ಇವೆ. ಈ ಪ್ರಮಾಣವು ಬೇಡಿಕೆಗೆ ಅನುಗುಣವಾಗಿ ಇರುವುದಿಲ್ಲ. ಹೊಸ ಅಂಗನವಾಡಿ ಕೇಂದ್ರಗಳನ್ನು ತೆರೆಯಲು ಕೇಂದ್ರ ಸರ್ಕಾರ ಅನುಮತಿ ನೀಡಿರುವುದಿಲ್ಲ.

ಆ) ಪ್ರಸ್ತಾವನೆಯನ್ನು ಕೇಂದ್ರ ಸರ್ಕಾರಕ್ಕೆ ದಿನಾಂಕ: 28.06.02ರಂದು ಸಲ್ಲಿಸಲಾಗಿತ್ತು. ಕೇಂದ್ರ ಸರ್ಕಾರ ಸದ್ಯಕ್ಕೆ ಅಂಗನವಾಡಿ ಕೇಂದ್ರಗಳನ್ನು ಮಂಜೂರು ಮಾಡಲು ಸಾಧ್ಯವಿಲ್ಲವೆಂದು ದಿನಾಂಕ: 16–09–02ರ ಪತ್ರದಲ್ಲಿ ತಿಳಿಸಿರುತ್ತಾರೆ.

**ಭದ್ರಾ ಸಹಕಾರಿ ಸಕ್ಕರೆ ಕಾರ್ಖಾನೆಯ ವಿಷಯದಲ್ಲಿ ಉಚ್ಚ ನ್ಯಾಯಾಲಯ ನೀಡಿದ ತೀರ್ಪು**

2378 (2959) : ಶ್ರೀ ಎಸ್.ಎ. ರವೀಂದ್ರನಾಥ್ (ಮಾಯಕೊಂಡ) ಮಾನ್ಯ ಸಹಕಾರ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?